# ತಡಗವಾಡಿ ಗ್ರಾಮ ಪಂಚಾಯಿತಿ ಕಾರ್ಯಾಲಯ

ತಡಗವಾಡಿ

ಶ್ರೀರಂಗಪಟ್ಟಣ ತಾಲ್ಲೂಕು

ಸಂ: 28/2020-21 ಮಂಡ್ಯ ಜಿಲ್ಲೆ.

ದಿನಾಂಕ : 21.05.2020

ರವರಿಗೆ,
ಬಿ.ಎಸ್.ಯಡಿಯೂರಪ್ಪ
ಮಾನ್ಯ ಮುಖ್ಯಮಂತ್ರಿಗಳು
ರಾಜ್ಯ ಸರ್ಕಾರ, ವಿಧಾನಸೌಧ, ಬೆಂಗಳೂರು

ವಿಷಯ : ಗ್ರಾಮ ಪಂಚಾಯತ್ ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್ -19 ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ ಕರ್ನಾಟಕದಲ್ಲಿ ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19 ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ.

ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದ ರಥ ಮುನ್ನಡೆಸುವಲ್ಲಿ, ಇಬ್ಬರ ಪಾತ್ರವೂ ಬಹಳ ಪ್ರಮುಖವಾದುದು. ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಯಂ ಸರ್ಕಾರ , ಹೀಗಾಗಿಯೇ ಇಡೀ ರಾಜ್ಯಾದ್ಯಂತ ಕೋವಿಡ್-19ರ ಪರಿಸ್ಥಿತಿ ಘೋಷಣೆಯು ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ ಸ್ವಯಂಸೇವಾ ಸಂಸ್ಥೆಗಳ, ಸ್ವಯಂ ಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ ( ಕಾರ್ಯಪಡೆ) ರೂಪಿಸಿ ಇದೇ ಪಂಚಾಯತ್‌ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರಿಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ-ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನು ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು. ಇಲ್ಲಿನ ಪರಿಸ್ಥಿತಿ ಹೇಗಿದೆ.ಆಗಬೇಕಾದ ಪ್ರಮುಖ ಕಾರ್ಯಗಳೇನು.ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ.

ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ , ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ .ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರೆಯುತ್ತಿರುವ ಈ ಸವಾಲಿನ ಸಮಯದಲ್ಲಿ ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಸಮಂಜಸವಾದುದು. ತಮ್ಮ ಸರ್ಕಾರದ ಈ ಆಲೋಚನೆ ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು , ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರೆಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ , ನಮ್ಮ ಪಂಚಾಯತ್ ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ, ಇದೇ ಪಂಚಾಯತ್ ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಇತಿ

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು

ತಡಗವಾಡಿ.....ಗ್ರಾಮ ಪಂಚಾಯತ್ ಶ್ರೀರಂಗಪಟ್ಟಣ........ತಾಲ್ಲೂಕು, ..........ಮಂಡ್ಯ. ಜಿಲ್ಲೆ

ಯಥಾ ಪ್ರತಿ :

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ , ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು , ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ , ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ , ಕರ್ನಾಟಕ

K.M.Poornima

ಅಧ್ಯಕ್ಷರು
ಗ್ರಾಮ ಪಂಚಾಯಿತಿ
ತಡಗವಾಡಿ

# ತಡಗವಾಡಿ ಗ್ರಾಮ ಪಂಚಾಯಿತಿ ಕಾರ್ಯಾಲಯ

ತಡಗವಾಡಿ    ಶ್ರೀರಂಗಪಟ್ಟಣ ತಾಲ್ಲೂಕು    ಮಂಡ್ಯ ಜಿಲ್ಲೆ

ದಿನಾಂಕ : ..................

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಕೆ.ಎಂ.ಪೂರ್ಣಿಮಾ ಕೋಂ ಟಿ.ಕೆ ಸತೀಶ | ಅಧ್ಯಕ್ಷರು | K.M.Poornima |
| 2 | ಕುಮಾರ ಬಿನ್ ನರಸಿಂಹಾಚಾರಿ | ಉಪಾಧ್ಯಕ್ಷರು | |
| 3 | ಟಿ.ಕೆ ದಯಾನಂದಸ್ವಾಮಿ ಬಿನ್ ಕೆಂಪೇಗೌಡ | ಸದಸ್ಯರು | Dayananda Swamy.K |
| 4 | ವೆಂಕಟಮ್ಮ ಕೋಂ ವೆಂಕಟಯ್ಯ | ಸದಸ್ಯರು | |
| 5 | ಸತ್ಯಭಾಮ ಕೋಂ ಶಂಕರೇಗೌಡ | ಸದಸ್ಯರು | ಸತ್ಯಭಾಮ |
| 6 | ಜಿ.ರಾಜೇಶ ಬಿನ್ ಚಿಕ್ಕಬಳ್ಳಾರಿಗೌಡ | ಸದಸ್ಯರು | Rajesh. G |
| 7 | ಗೌರಮ್ಮ ಕೋಂ ಗವಿಸಿದ್ದಶೆಟ್ಟಿ | ಸದಸ್ಯರು | ಗೌರಮ್ಮ |
| 8 | ಟಿ.ಎಂ.ಗಿರೀಶ ಬಿನ್ ಹೊನ್ನಾಚಾರಿ | ಸದಸ್ಯರು | T.H Girish. |
| 9 | ಚಂದ್ರಹಾಸ ಬಿನ್ ಹೊಂಬಾಳೇಗೌಡ | ಸದಸ್ಯರು | ಚಂದ್ರಹಾಸ |
| 0 | ಎಂ.ಸ್ವಾಮೀಗೌಡ ಬಿನ್ ಮಾಯೀಗೌಡ | ಸದಸ್ಯರು | M. ಸ್ವಾಮಿಗೌಡ |
| 1 | ಜ್ಯೋತಿ ಬಿನ್ ರವಿಕುಮಾರ್ | ಸದಸ್ಯರು | ಜ್ಯೋತಿ |
| | ಜಯಲಕ್ಷ್ಮಿ ಕೋಂ ಗಿರೀಶ | ಸದಸ್ಯರು | ಎಂ.ಆರ್. ಜಯಲಕ್ಷ್ಮಿ |
| | ಕುಮಾರಿ.ಕೆ ಕೋಂ ಎ.ಸಿ.ಪುಟ್ಟಸ್ವಾಮಿ | ಸದಸ್ಯರು | K ಕುಮಾರಿ |
| | ಎ.ಸಿ.ಸತೀಶ್ ಬಿನ್ ಚಿಕ್ಕದೇಗೌಡ | ಸದಸ್ಯರು | AC ಸತೀಶ |
| | ಎನ್.ಸಿ.ರಾಧ ಬಿನ್ ಕೃಷ್ಣೇಗೌಡ | ಸದಸ್ಯರು | |
| | ಸಿ.ಎನ್.ನಿಂಗೇಗೌಡ ಬಿನ್ ಕೆ.ನಿಂಗೇಗೌಡ | ಸದಸ್ಯರು | ಸಿ.ಎನ್ ನಿಂಗೇಗೌಡ |
| | ಶೃತಿ.ಟಿ.ಬಿ ಕೋಂ ರಾಮಕೃಷ್ಣ | ಸದಸ್ಯರು | Shruthi T.B |

K.M.Poornima
ಅಧ್ಯಕ್ಷರು
ಗ್ರಾಮ ಪಂಚಾಯಿತಿ
ತಡಗವಾಡಿ